MVC No.256/2021 PW-1

<u>ದಿನಾಂಕ **01.08.2024** ರಂದು ಸಾಕ್ಷಿಯನ್ನು ಕರೆಯಿಸಿ, ಪ್ರಮಾಣ ವಚನ ಬೋಧಿಸಲಾಯಿತು.</u>

<u>ಪಾಟೀ ಸವಾಲು ಃ ಎದುರುದಾರರಾದ ಆರ್ **2** ಪರ ಶ್ರೀ ಎಸ್ ವೈ ಎಸ್ ವಕೀಲರಿಂದ ಃ</u>

ನಾನು ಗ್ಯಾರೇಜ್ ನಲ್ಲಿ ಕೆಲಸ ಮಾಡುತ್ತಿದ್ದೆ. ಈಗ ಸುಮ್ಮನೆ ಇದ್ದೇನೆ. ನಾನು ಗ್ಯಾರೇಜ್ ನಲ್ಲಿ ಕೆಲಸ ಮಾಡುತ್ತಿದ್ದ ಬಗ್ಗೆ ದಾಖಲೆಯನ್ನು ನೀಡಿರುತ್ತೇನೆ. ನಾನು ದ್ವಿತೀಯ ಪಿಯುಸಿಯವರೆಗೆ ಓದಿರುತ್ತೇನೆ. ನನಗೆ 22 ವರ್ಷ ವಯಸ್ಸಾಗಿರುತ್ತದೆ. ಅಪಘಾತವಾದಾಗ ನಾನು ಕೆಲಸ ಮಾಡುತ್ತಿದ್ದೆ. ಅಪಘಾತವಾದ ದಿನ ಚನ್ನಪಟ್ಟಣದಿಂದ ಕುಂಬಾರುಕಟ್ಟೆ ಕಡೆಗೆ ಹೋಗುತ್ತಾ ಇದ್ದೆ. ನಾವು ಬೈಕಿನ ಬಳಿ ಇಬ್ಬರು ನಿಂತಿದ್ದೆವು. ನನ್ನ ಸ್ನೇಹಿತ ಬೈಕ್ ಅನ್ನು ಅವರೇ ಅಂದರೆ ಮಂಜುರವರು ಓಡಿಸುತ್ತಿದ್ದರು. ಅವರಿಗೆ ಡಿಎಲ್ ಇತ್ತು. ಅದನ್ನು ಹಾಜರುಪಡಿಸಲು ತೊಂದರೆ ಇಲ್ಲ. ಮಂಜುರವರಿಗೆ ಪೆಟ್ಟಾಗಿಲ್ಲ, ನನಗೆ ಒಬ್ಬನಿಗೆ ಗಾಯವಾಗಿರುತ್ತದೆ. ಮುಂದಿನಿಂದ ವಾಹನ ಬಂದು ಡಿಕ್ಕಿ ಪಡಿಸಿರುತ್ತದೆ. ಸದರಿ ವಾಹನವನ್ನು ಯಾರು ಚಾಲನೆ ಮಾಡುತ್ತಿದ್ದರು ಎಂದರೆ ಗೊತ್ತಿಲ್ಲ. ಅಪಘಾತವಾದ ದಿನ ನಾನೇ ವಾಹನವನ್ನು ಚಾಲನೆ ಮಾಡಿಕೊಂಡು ಹೋಗಿ ಡಿಕ್ಕಿ ಪಡಿಸಿರುತ್ತೇನೆಂದರೆ ಸುಳ್ಳು. ಅಪಘಾತ ನೋಡಿದ ಪ್ರತ್ಯಕ್ಷ ಸಾಕ್ಷಿದಾರರನ್ನು ಕರೆತಂದು ಸಾಕ್ಷಿ ಮಾಡಿಸಲು ತೊಂದರೆ ಇಲ್ಲ. ನನ್ನ ತಾಯಿ ದೂರನ್ನು ನೀಡಿರುತ್ತಾರೆ. ನಾನು ಮೆಡಿಕಲ್ ಬಿಲ್ಲುಗಳನ್ನು ಸೃಷ್ಟಿ ಮಾಡಿ ಹಾಜರುಪಡಿಸಿದ್ದೇನೆ ಎಂದರೆ ಸುಳ್ಳು. ನನಗೆ ಚಿಕಿತ್ಸೆ ನೀಡಿದ ವೈದ್ಯರನ್ನು ಕರೆತಂದು ಸಾಕ್ಷಿ ಮಾಡಿಸಲು ತೊಂದರೆ ಇಲ್ಲ. ನನ್ನ ವೈದ್ಯಕೀಯ ಚಿಕಿತ್ಸೆಗಾಗಿ 3 ಲಕ್ಷ ರೂಪಾಯಿ ಹಣ ಖರ್ಚಾಗಿದೆ ಎಂದು ಹೇಳಿದ್ದು ಅದು ಸುಳ್ಳು ಎಂದರೆ ಸುಳ್ಳು. ನನ್ನ ಬಳಿ ಹಸಿರು ಪಡಿತರ ಚೀಟಿ ಇದೆ. ಸರ್ಕಾರಿ ಆಸ್ಪತ್ರೆಯಲ್ಲಿ ಎಲ್ಲಾ ಚಿಕಿತ್ಸೆಯನ್ನು ಉಚಿತವಾಗಿ ನೀಡುತ್ತಾರೆಂದರೆ ಗೊತ್ತಿಲ್ಲ. ನಾನು ಉದ್ದೇಶ ಪೂರ್ವಕವಾಗಿ 40 ಸಾವಿರ ಖರ್ಚಾಗಿರುತ್ತದೆ ಎಂದು ತಿಳಿಸಿರುತ್ತೇವೆಂದರೆ ಸುಳ್ಳು. ಸುಳ್ಳು ಅರ್ಜಿ ಹಾಕಿ ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆ

ಎಂದರೆ ಸುಳ್ಳು.ನನಗೆ ಯಾವುದೇ ಆರ್ಥಿಕ ಮತ್ತು ದೈಹಿಕ ನಷ್ಟ ಉಂಟಾಗಿಲ್ಲವೆಂದರೆ ಸುಳ್ಳು. ನಾನು ಹೆಚ್ಚುವರಿ ಪರಿಹಾರ ಪಡೆಯಲು ಸುಳ್ಳು ಕೇಸು ದಾಖಲಿಸಿ ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆ ಎಂದರೆ ಸುಳ್ಳು. ಪರಿಹಾರ ಪಡೆಯುವ ಸಲುವಾಗಿ

ಮರುವಿಚಾರಣೆ ಃ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನವನ್ನು ಗಣಕೀಕರಣ ಮಾಡಲಾಯಿತು)**Na**

ಓ ಹೇ ಕೇ ಸ ಒ

(ವೆಂಕಟೇಶಪ್ಪ. ವಿ)
ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ.,ಚನ್ನಪಟ್ಟಣ.